# ಕರ್ನಾಟಕ ಲೋಕಾಯುಕ್ತ

ನಂ.ಕಂಪ್ಲೆಂಟ್/ಉಪಲೋಕ್/ಜಿಎಲ್‌ಬಿ-1445/2015/ಡಿಆರ್‌ಇ-1

ಬಹುಮಹಡಿಗಳ ಕಟ್ಟಡ,
ಡಾ:ಅಂಬೇಡ್ಕರ್ ವೀದಿ;
ಬೆಂಗಳೂರು.
ದಿನಾಂಕ: 5/9/2018

## ಕರ್ನಾಟಕ ಲೋಕಾಯುಕ್ತ ಕಾಯಿದೆ, 1984 ರ ಕಲಂ 12(3) ರನ್ವಯ ವರದಿ

ವಿಷಯ: (1) ಶ್ರೀ.ಡಿ.ಎಲ್.ನಾರಾಯಣ್, ಆಯುಕ್ತರು, ಮಹಾನಗರ ಪಾಲಿಕೆ, ಬಳ್ಳಾರಿ (ಹಾಲಿ ನಿವೃತ್ತ), (2) ಶ್ರೀ.ಜಿ.ಬಿ.ದೇವರಾಜು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಮಹಾನಗರ ಪಾಲಿಕೆ, ಬಳ್ಳಾರಿ (ಹಾಲಿ ಕಾರ್ಯಪಾಲಕ ಅಭಿಯಂತರರು, ಕೆ.ಆರ್.ಐ.ಡಿ.ಎಲ್, ದಾವಣಗೆರೆ ವಿಭಾಗ-2), (3) ಶ್ರೀ.ಬಿ.ಪಿ.ಲಿಂಗರಾಜು, ಉಪ ನಿರ್ದೇಶಕರು/ಕಾರ್ಯಪಾಲಕ ಅಭಿಯಂತರರು, ಕೆ.ಆರ್.ಐ.ಡಿ.ಎಲ್, ಬಳ್ಳಾರಿ (ಹಾಲಿ ಕೆ.ಆರ್.ಐ.ಡಿ.ಎಲ್, ಕೇಂದ್ರ ವಲಯ, ಚಿತ್ರದುರ್ಗ) ಮತ್ತು (4) ಶ್ರೀ.ಅಶ್ವಥ ನಾರಾಯಣ ಸ್ವಾಮಿ, ಸಹಾಯಕ ನಿರ್ದೇಶಕರು/ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಆರ್.ಐ.ಡಿ.ಎಲ್, ಬಳ್ಳಾರಿ, - ಇವರ ವಿರುದ್ಧದ ನಡವಳಿ ಕುರಿತು.

******

1. ಶ್ರೀ.ಹೆಚ್.ಗೋವಿಂದರಾಜು ಬಿನ್ ಹೆಚ್.ಈರಣ್ಣ, ಮಹಾನಂದಿ ಕೊಟ್ಟಂ, ತಾಳೂರು ರಸ್ತೆ, ಬಳ್ಳಾರಿ, (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ಇವರು (1) ಶ್ರೀ.ಡಿ.ಎಲ್.ನಾರಾಯಣ್, ಆಯುಕ್ತರು, ಮಹಾನಗರ ಪಾಲಿಕೆ, ಬಳ್ಳಾರಿ (ಹಾಲಿ ನಿವೃತ್ತ), (2) ಶ್ರೀ.ಜಿ.ಬಿ.ದೇವರಾಜು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಮಹಾನಗರ ಪಾಲಿಕೆ, ಬಳ್ಳಾರಿ (ಹಾಲಿ ಕಾರ್ಯಪಾಲಕ ಅಭಿಯಂತರರು, ಕೆ.ಆರ್.ಐ.ಡಿ.ಎಲ್, ದಾವಣಗೆರೆ ವಿಭಾಗ-2), (3) ಶ್ರೀ.ಬಿ.ಪಿ.ಲಿಂಗರಾಜು, ಉಪ ನಿರ್ದೇಶಕರು/ಕಾರ್ಯಪಾಲಕ ಅಭಿಯಂತರರು, ಕೆ.ಆರ್.ಐ.ಡಿ.ಎಲ್, ಬಳ್ಳಾರಿ (ಹಾಲಿ ಕೆ.ಆರ್.ಐ.ಡಿ.ಎಲ್, ಕೇಂದ್ರ ವಲಯ, ಚಿತ್ರದುರ್ಗ) ಮತ್ತು (4) ಶ್ರೀ.ಅಶ್ವಥ ನಾರಾಯಣ ಸ್ವಾಮಿ, ಸಹಾಯಕ ನಿರ್ದೇಶಕರು/ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಆರ್.ಐ.ಡಿ.ಎಲ್, ಬಳ್ಳಾರಿ, (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ದೂರು ಸಲ್ಲಿಸಿದ ಮೇರೆಗೆ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 9 ರಡಿಯಲ್ಲಿ ದತ್ತವಾದ ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ.

2. ದೂರುದಾರರು ತಮ್ಮ ದೂರಿನಲ್ಲಿ ಬಳ್ಳಾರಿ ಜಿಲ್ಲಾ ಡಾ:ಬಿ.ಆರ್.ಅಂಬೇಡ್ಕರ್ ಸಂಘದ ಆವರಣದಲ್ಲಿ ಹಾಸ್ಟೆಲ್ ನಿರ್ಮಾಣಕ್ಕಾಗಿ ಬಳ್ಳಾರಿ ಮಹಾನಗರ ಪಾಲಿಕೆಯಿಂದ ಶೇ.22.75

ಅನುದಾನದಡಿಯಲ್ಲಿ 12.50 ಲಕ್ಷ ರೂಪಾಯಿಗಳು ಮಂಜೂರಾಗಿದ್ದು, ಅದರಲ್ಲಿ ರೂ.9,62,500/- ಗಳು ಬಿಡುಗಡೆಯಾಗಿರುತ್ತದೆ. ಜಿಲ್ಲಾ ಡಾ:ಬಿ.ಆರ್.ಅಂಬೇಡ್ಕರ್ ಸಂಘದ ಆವರಣದಲ್ಲಿ ಹಾಸ್ಟೆಲ್ ನಿರ್ಮಾಣವಾಗಿರುವುದಿಲ್ಲ. ಕರ್ನಾಟಕ ಭೂಸೇನಾ ನಿಗಮ ಇವರು ಕಾಮಗಾರಿ ಪೂರ್ಣಗೊಂಡಿದೆಯೆಂದು ಪ್ರಮಾಣ ಪತ್ರ ನೀಡಿ ರೂ.9,62,500/-ನ್ನು ತೆಗೆದುಕೊಂಡಿರುತ್ತಾರೆ. ಡಾ:ಬಿ.ಆರ್.ಅಂಬೇಡ್ಕರ್ ಸಂಘದ ಅಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯದರ್ಶಿಗಳು ಮತ್ತು ಕರ್ನಾಟಕ ಭೂಸೇನಾ ನಿಗಮದವರು ಹಣವನ್ನು ಲಪಟಾಯಿಸಿದ್ದು, ಸರ್ಕಾರಕ್ಕೆ ವಂಚನೆ ಮಾಡಿರುತ್ತಾರೆಂದು ಆಪಾದಿಸಿ ದೂರನ್ನು ಸಲ್ಲಿಸಿರುತ್ತಾರೆ.

3. ದೂರುದಾರರ ದೂರಿನ ಬಗ್ಗೆ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಪೊಲೀಸ್ ಉಪಾಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಬಳ್ಳಾರಿ ಇವರಿಗೆ ಆದೇಶಿಸಲಾಗಿತ್ತು. ಪೊಲೀಸ್ ಉಪಾಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಬಳ್ಳಾರಿ ಇವರು ವರದಿಯನ್ನು ಸಲ್ಲಿಸಿದ್ದು, ಈ ಕೆಳಗಿನಂತೆ ಅಭಿಪ್ರಾಯವನ್ನು ನೀಡಿರುತ್ತಾರೆ.

"ಅರ್ಜಿದಾರರು ಆಯುಕ್ತರು, ಮಹಾನಗರ ಪಾಲಿಕೆ, ಕೆ.ಆರ್.ಐ.ಡಿ.ಎಲ್. ಸಂಸ್ಥೆ ಮತ್ತು ಅಧ್ಯಕ್ಷರು ಬಳ್ಳಾರಿ ಜಿಲ್ಲಾ ಅಂಬೇಡ್ಕರ್ ಭವನ ಬಳ್ಳಾರಿ ಇವರ ವಿರುದ್ಧ ಮಾಡಿರುವ ಅಪಾದನೆಗೆ ಸಂಬಂಧಿಸಿದಂತೆ ಅರ್ಜಿ ವಿಚಾರಣಾ ಕಾಲಕ್ಕೆ ಸಂಗ್ರಹಿಸಿದ ದಾಖಲಾತಿಗಳಿಂದ ಎಸ್.ಸಿ/ಎಸ್.ಟಿ. ಹಾಸ್ಟೆಲ್‌ನ ಕಾಮಗಾರಿಯನ್ನು ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ ಇವರ ಆದೇಶದ ಮೇರೆಗೆ ಮಹಾನಗರ ಪಾಲಿಕೆಯ ಆಯುಕ್ತರು ಶೇ.24.10 ಯೋಜನೆಯ ಅನುದಾನದಡಿ ಬಿಡುಗಡೆ ಮಾಡಿದ್ದು, ನಂತರ ನಕಾಶೆಯ ಅನುಸಾರ ಹಾಗೂ ಅನುದಾನದ ಅನುಸಾರ ಸಂಬಂಧಿಸಿದ ಕೆ.ಆರ್.ಐ.ಡಿ.ಎಲ್. ಸಂಸ್ಥೆಯವರು ನಿರ್ವಹಿಸಿರುವುದು ಕಂಡುಬರುತ್ತದೆ ಹಾಗೂ ಸದರಿ ಕಾಮಗಾರಿಯ ಅನುದಾನವನ್ನು ಮಹಾನಗರ ಪಾಲಿಕೆಯವರು ಹಂತಹಂತವಾಗಿ ಬಿಡುಗಡೆ ಮಾಡಿರುವುದು ದಾಖಲಾತಿಗಳ ಪರಿಶೀಲನೆಯಿಂದ ಕಂಡುಬರುತ್ತದೆ.

ಮುಂದುವರೆದು ಅಧ್ಯಕ್ಷರು, ಅಂಬೇಡ್ಕರ್ ಭವನ, ಬಳ್ಳಾರಿ ಇವರು ಖಾಸಗಿ ಸಂಸ್ಥೆಯ ಅಧ್ಯಕ್ಷರಾಗಿದ್ದು, ಇವರು ಸರ್ಕಾರದ ಅನುದಾನವನ್ನು ಬಳಸಿಕೊಂಡು ಎಸ್.ಸಿ/ಎಸ್.ಟಿ ವಿದ್ಯಾರ್ಥಿನಿಲಯವನ್ನು ಕಟ್ಟುವುದಾಗಿ ಮನವಿ ಪತ್ರವನ್ನು ನೀಡಿರುವುದು ಅರ್ಜಿ ವಿಚಾರಣಾ ಕಾಲಕ್ಕೆ ಕಂಡುಬಂದಿರುತ್ತದೆ. ನಂತರ ಸದರಿಯವರ ಮನವಿಯನ್ನು ಜಿಲ್ಲಾಧಿಕಾರಿಗಳು ಅನುಮೋದನೆ ಮಾಡಿ ಮಹಾನಗರ ಪಾಲಿಕೆಯ ಶೇ.24.10 ಯೋಜನೆಯ ಅನುದಾನದ ಅಡಿಯಲ್ಲಿ ಕಾಮಗಾರಿಗೆ ಹಣ ಬಿಡುಗಡೆ ಮಾಡಲು ಸೂಚಿಸಿ ಕಟ್ಟಡ ಕಾಮಗಾರಿಯನ್ನು ಕೆ.ಆರ್.ಐ.ಡಿ.ಎಲ್. ಸಂಸ್ಥೆಯವರು ನಿರ್ವಹಿಸಲು ಕ್ರಮ ಕೈಗೊಂಡಿರುತ್ತಾರೆ. ಸದರಿ ಭವನಕ್ಕೆ ಅಭಿಯಂತರರು, ಅರ್ಜಿದಾರರು ಮತ್ತು ಕಾರ್ಪೊರೇಷನ್ ಸಿಬ್ಬಂದಿಯೊಂದಿಗೆ ತೆರಳಿ ಖುದ್ದಾಗಿ ಪರಿಶೀಲನೆ ಮಾಡಿದ್ದು, ಸದರಿ ಭವನವನ್ನು ಈ ಹಿಂದೆ ಸದರಿ ಸಂಸ್ಥೆಯವರು

ಬೇರೆಬೇರೆ ಮೂಲಗಳಿಂದ ಪಡೆದ ಆದಾಯದಿಂದ ಕಟ್ಟಿಸಿದ್ದು, ಸದರಿ ಭವನದಲ್ಲಿ ಹಾಸ್ಟೆಲ್‌ಗಾಗಿ ಸಂಬಂಧಿಸಿದಂತೆ ಬಿಡುಗಡೆಯಾದ ಅನುದಾನದಡಿ ಕಟ್ಟಡ ಕಾಮಗಾರಿ ನಡೆದಿದ್ದು ಕಂಡುಬರುತ್ತದೆ. ಹಾಲಿ ಸ್ಥಳ ಪರಿಶೀಲನೆ ಸಮಯದಲ್ಲಿ ಹಾಸ್ಟೆಲ್ ನಡೆಯುತ್ತಿರುವುದು ಕಂಡುಬಂದಿರುವುದಿಲ್ಲ. ನಂತರ ಕಾಮಗಾರಿಯ ನಕಾಶೆಯ ಅನುಸಾರ ಕಟ್ಟಡ ನಿರ್ಮಿಸಿರುವ ಕುರಿತು ಪರಿಶೀಲಿಸಿ ವರದಿಯನ್ನು ನೀಡಲು ಶ್ರೀ.ಬಸವರೆಡ್ಡಿ, ಸಹಾಯಕ ಅಭಿಯಂತರರು, ಪಿ.ಡಬ್ಲ್ಯೂ.ಡಿ., ಬಳ್ಳಾರಿ ಇವರಿಗೆ ತಿಳಿಸಿದ್ದು, ಸದರಿಯವರು ಪರಿಶೀಲಿಸಿ ಮೇಲಾಧಿಕಾರಿಗಳ ಮುಖಾಂತರ ದಿ.20/3/16 ರಲ್ಲಿ ನೀಡಿದ ವರದಿಯಲ್ಲಿ ಕಟ್ಟಡ ನಿರ್ಮಾಣ ಕಾಮಗಾರಿ ನಡೆದಿರುತ್ತದೆಯೆಂದು ವರದಿಯನ್ನು ನೀಡಿರುತ್ತಾರೆ. ಆದ್ದರಿಂದ, ಅರ್ಜಿದಾರರು ಮಾಡಿರುವ ಆರೋಪವಾದ ಅನುದಾನವನ್ನು ದುರ್ಬಳಕೆ ಮಾಡಿ ಕಟ್ಟಡವನ್ನು ಕಟ್ಟಿರುವುದಿಲ್ಲವೆಂಬುದರ ಕುರಿತಾಗಿ ರುಜುವಾತು ಪಡಿಸುವ ಪೂರಕ ಸಾಕ್ಷ್ಯಾಧಾರಗಳು ದೊರೆತಿರುವುದಿಲ್ಲ" ಎಂದು ವರದಿಯನ್ನು ನೀಡಿರುತ್ತಾರೆ.

4. ತನಿಖಾ ವರದಿಯ ಮೇಲೆ ದೂರುದಾರರು ಪ್ರತ್ಯುತ್ತರವನ್ನು ಸಲ್ಲಿಸಿದ್ದು, ಪ್ರತ್ಯುತ್ತರದಲ್ಲಿ ಡಾ:ಬಿ.ಆರ್.ಅಂಬೇಡ್ಕರ್ ಸಂಘ, ಬಳ್ಳಾರಿ ಇದರ ಅಧ್ಯಕ್ಷರು ದೂರುದಾರರಿಗೆ ಮಾಹಿತಿಯನ್ನು ನೀಡಿರುತ್ತಾರೆ. ಆದ್ದರಿಂದ, ಪ್ರಕರಣವನ್ನು ಹಿಂಪಡೆಯುತ್ತಿದ್ದೇನೆ ಎಂದು ಪ್ರತ್ಯುತ್ತರವನ್ನು ಸಲ್ಲಿಸಿರುತ್ತಾರೆ.

5. ತನಿಖಾ ವರದಿ ಹಾಗೂ ವರದಿಯ ಜೊತೆ ಹಾಜರು ಪಡಿಸಿರುವ ದಾಖಲಾತಿಗಳನ್ನು ಪರಿಶೀಲಿಸಿದಾಗ, ಡಾ:ಬಿ.ಆರ್.ಅಂಬೇಡ್ಕರ್ ಸಂಘದ ವರಣದಲ್ಲಿ ಹೊಸದಾಗಿ ವಿದ್ಯಾರ್ಥಿ ವಸತಿ ನಿಲಯ ಕಟ್ಟಡ ನಿರ್ಮಿಸಲು ಆರ್ಥಿಕ ಸಹಾಯ ಒದಗಿಸುವುದಕ್ಕಾಗಿ ರೂ.12.50 ಲಕ್ಷಗಳಿಗೆ ಆಡಳಿತಾತ್ಮಕ ಮಂಜೂರು ನೀಡಿ ಸದರಿ ಕಾಮಗಾರಿಯನ್ನು ಕೆ.ಆರ್.ಐ.ಡಿ.ಎಲ್. ಬಳ್ಳಾರಿ ಇವರಿಗೆ ವಹಿಸಲು ಸೂಚಿಸಿರುತ್ತಾರೆಂದು ಮಹಾನಗರ ಪಾಲಿಕೆಯವರು ಟಿಪ್ಪಣಿ ಮಂಡಿಸಿರುವುದು ಕಂಡುಬರುತ್ತದೆ. ಅದೇರೀತಿ, ವಿದ್ಯಾರ್ಥಿನಿಲಯ ನಿರ್ಮಾಣಕ್ಕಾಗಿ ಹಣವನ್ನು ಬಳ್ಳಾರಿ ಮಹಾನಗರ ಪಾಲಿಕೆ ವತಿಯಿಂದ ಮಂಜೂರು ಮಾಡಿರುವುದು ಕಂಡುಬರುತ್ತದೆ. ಆದ್ದರಿಂದ, ವಸತಿ ನಿಲಯ ಕಟ್ಟಡ ನಿರ್ಮಿಸಲು ಸಾರ್ವಜನಿಕ ಹಣವನ್ನು ಬಿಡುಗಡೆ ಮಾಡಿರುವುದು ಸ್ಪಷ್ಟವಾಗುತ್ತದೆ.

6. ತನಿಖಾಧಿಕಾರಿಯವರು ತನ್ನ ವರದಿಯಲ್ಲಿ ಸ್ಥಳ ಪರಿಶೀಲನೆ ಸಮಯದಲ್ಲಿ ಹಾಸ್ಟೆಲ್ ನಡೆಯುತ್ತಿರುವುದು ಕಂಡುಬಂದಿರುವುದಿಲ್ಲವೆಂದು ತಿಳಿಸಿದ್ದು, ಹಾಜರುಪಡಿಸಿರುವ ಭಾವಚಿತ್ರವನ್ನು ಪರಿಶೀಲಿಸಲಾಗಿ ಹಾಸ್ಟೆಲ್ ಕಟ್ಟಡ ಇರುವುದು ಕಂಡುಬರುತ್ತಿಲ್ಲ. ಗೌರವಾನ್ವಿತ ಉಪಲೋಕಾಯುಕ್ತರು ದಾವಣಗೆರೆ ಪ್ರವಾಸ ಸಂದರ್ಭದಲ್ಲಿ ಸದರಿ ಕಟ್ಟಡವನ್ನು ತಪಾಸಣೆ ನಡೆಸಿದಾಗ ಅಲ್ಲಿ ಹಾಸ್ಟೆಲ್ ಇಲ್ಲದೆ ಇರುವುದು ಕಂಡುಬರುತ್ತದೆ. ಆದ್ದರಿಂದ, (1) ಶ್ರೀ.ಡಿ.ಎಲ್.ನಾರಾಯಣ್, ಆಯುಕ್ತರು, ಮಹಾನಗರ ಪಾಲಿಕೆ, ಬಳ್ಳಾರಿ (ಹಾಲಿ ನಿವೃತ್ತ),

N. Anand

(2) ಶ್ರೀ.ಜಿ.ಬಿ.ದೇವರಾಜು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಮಹಾನಗರ ಪಾಲಿಕೆ, ಬಳ್ಳಾರಿ (ಹಾಲಿ ಕಾರ್ಯಪಾಲಕ ಅಭಿಯಂತರರು, ಕೆ.ಆರ್.ಐ.ಡಿ.ಎಲ್, ದಾವಣಗೆರೆ ವಿಭಾಗ-2), (3) ಶ್ರೀ.ಬಿ.ಪಿ.ಲಿಂಗರಾಜು, ಉಪ ನಿರ್ದೇಶಕರು/ಕಾರ್ಯಪಾಲಕ ಅಭಿಯಂತರರು, ಕೆ.ಆರ್.ಐ.ಡಿ.ಎಲ್, ಬಳ್ಳಾರಿ (ಹಾಲಿ ಕೆ.ಆರ್.ಐ.ಡಿ.ಎಲ್, ಕೇಂದ್ರ ವಲಯ, ಚಿತ್ರದುರ್ಗ) ಮತ್ತು (4) ಶ್ರೀ.ಅಶ್ವಥ ನಾರಾಯಣ ಸ್ವಾಮಿ, ಇವರನ್ನು ಪಕ್ಷಗಾರರನ್ನಾಗಿ ಮಾಡಿ ಅವರಿಂದ ಆಕ್ಷೇಪಣೆಯನ್ನು ತರಿಸಲಾಗಿರುತ್ತದೆ.

7. 1ನೇ ಎದುರುದಾರರು ಆಕ್ಷೇಪಣೆಯನ್ನು ಸಲ್ಲಿಸಿದ್ದು, ಆಕ್ಷೇಪಣೆಯಲ್ಲಿ ದಿ.23/2/2011 ರಿಂದ ದಿ.9/7/2013 ರವರೆಗೆ ಬಳ್ಳಾರಿ ಮಹಾನಗರ ಪಾಲಿಕೆಯ ಆಯುಕ್ತರಾಗಿ ಕರ್ತವ್ಯ ನಿರ್ವಹಿಸಿರುತ್ತಾರೆ. ಬಳ್ಳಾರಿ ಮಹಾನಗರ ಪಾಲಿಕೆಯಿಂದ ಎಸ್.ಸಿ ಮತ್ತು ಎಸ್.ಟಿ. ಶೇ.22.75 ರ ಅನುದಾನದ ವ್ಯಾಪ್ತಿಯಲ್ಲಿ ಬಳ್ಳಾರಿ ಜಿಲ್ಲಾ ಡಾ:ಬಿ.ಆರ್.ಅಂಬೇಡ್ಕರ್ ಸಂಘದ ಎಸ್.ಸಿ/ಎಸ್.ಟಿ ವಿದ್ಯಾರ್ಥಿನಿಲಯದ ಕಟ್ಟಡ ನಿರ್ಮಾಣ ಪೂರ್ಣಗೊಳಿಸಲು ಆರ್ಥಿಕ ನೆರವು ನೀಡುವಂತೆ ಕಟ್ಟಡದ ಅಂದಾಜಿನೊಂದಿಗೆ ಬಳ್ಳಾರಿ ಜಿಲ್ಲೆ, ಡಾ:ಬಿ.ಆರ್.ಅಂಬೇಡ್ಕರ್ ಸಂಘದ ಅಧ್ಯಕ್ಷರು ದಿ.5/5/11 ರಂದು ಬಳ್ಳಾರಿಯ ಲೋಕಸಭಾ ಸದಸ್ಯರಿಗೆ ಪತ್ರ ಸಲ್ಲಿಸಿದ್ದರು. ದಿ.25/1/2012 ರ ಬಳ್ಳಾರಿ ಮಹಾನಗರ ಪಾಲಿಕೆಯ ಸಾಮಾನ್ಯ ಸಭೆಯಲ್ಲಿ ಡಾ:ಬಿ.ಆರ್.ಅಂಬೇಡ್ಕರ್ ಸಂಘಕ್ಕೆ ವಿದ್ಯಾರ್ಥಿಗಳ ವಸತಿ ನಿಲಯ ಕಟ್ಟಲು ಶೇ.22.75 ಯೋಜನೆಯಡಿಯಲ್ಲಿ 2012-13ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಂಡು ಅದರಂತೆ ಕ್ರಿಯಾ ಯೋಜನೆಯನ್ನು ಬಳ್ಳಾರಿ ಜಿಲ್ಲಾಧಿಕಾರಿಗಳಿಗೆ ಅನುಮೋದನೆಗಾಗಿ ಸಲ್ಲಿಸಲಾಗಿತ್ತು. ಮತ್ತು ಕಾಮಗಾರಿಯನ್ನು ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ವಹಿಸಿಕೊಡಲಾಗಿತ್ತು. ಹಾಸ್ಟೆಲ್ ಕಟ್ಟಡದ ಕಾಮಗಾರಿಯನ್ನು ಬಳ್ಳಾರಿಯ ಕೆ.ಆರ್.ಐ.ಡಿ.ಎಲ್.ಗೆ ವಹಿಸಿಕೊಟ್ಟು ಎಸ್.ಸಿ/ಎಸ್.ಟಿ ಶೇ.22.75 ರ ಕ್ರಿಯಾ ಯೋಜನೆಗೆ ಸರ್ಕಾರದ ಅಂಗವಾದ ಕೆ.ಆರ್.ಐ.ಡಿ.ಎಲ್.ಗ ಬಿಡುಗಡೆ ಮಾಡಿ ಬಳಿಕ ಪ್ರಮಾಣ ಪತ್ರಗಳ ಬಿಲ್ ಆಫ್ ಕ್ವಾಂಟಿಟಿ ಮತ್ತು ಪ್ರಗತಿ ವರದಿಗಳನ್ನು ಬಳ್ಳಾರಿ ಕೆ.ಆರ್.ಐ.ಡಿ.ಎಲ್.ನ ಕಾರ್ಯನಿರ್ವಾಹಕ ಅಭಿಯಂತರರಿಂದ ಪಡೆಯಲಾಗಿದೆ. ಆದ್ದರಿಂದ, ಫಿರ್ಯಾದುದಾರರ ಆಪಾದನೆ ಆಯುಕ್ತರ ವಿರುದ್ಧ ಸ್ಥಿರವಾಗುವುದಿಲ್ಲವೆಂದು ಹೇಳಿರುತ್ತಾರೆ.

8. 2ನೇ ಎದುರುದಾರರು ತನ್ನ ಆಕ್ಷೇಪಣೆಯಲ್ಲಿ ಪ್ರಸ್ತುತ ಅವರು ದಾವಣಗೆರೆಯ ಕೆ.ಆರ್.ಐ.ಡಿ.ಎಲ್. ಕಚೇರಿಯಲ್ಲಿ ಕಾರ್ಯಪಾಲಕ ಅಭಿಯಂತರರಾಗಿ ಕಾರ್ಯ ನಿರ್ವಹಿಸುತ್ತಿರುವುದರಿಂದ, ಸದರಿ ದೂರಿಗೆ ಸಂಬಂಧಿಸಿದ ದಾಖಲಾತಿಗಳು ಅವರ ಹತ್ತಿರ ಇರುವುದಿಲ್ಲ. ಬಳ್ಳಾರಿ ಮಹಾನಗರ ಪಾಲಿಕೆ ವತಿಯಿಂದ ಸದರಿ ದೂರಿಗೆ ಸಂಬಂಧಿಸಿದಂತೆ ದಾಖಲಾತಿಗಳನ್ನು ಪಡೆದು, ಚೆಕ್‌ಲಿಸ್ಟ್ ಮೂಲಕ ಪೂರಕ ದಾಖಲಾತಿಗಳೊಂದಿಗೆ ಆಕ್ಷೇಪಣೆ

ಸಲ್ಲಿಸುತ್ತಾ ಹಾಗೂ ಸದರಿ ಕಾಮಗಾರಿಯನ್ನು ನಿಯಮಾನುಸಾರವಾಗಿ ಮತ್ತು ಹಣ ದುರ್ಬಳಕೆ ಮಾಡದೆ ನಿರ್ವಹಿಸಿರುವುದಾಗಿ ಹೇಳಿರುತ್ತಾರೆ.

9. 3 ಮತ್ತು 4ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದೂರುದಾರರನ್ನು ಸಂಘದ ಆಜೀವ ಸದಸ್ಯತ್ವದಿಂದ ತೆಗೆದಿದ್ದರಿಂದ, ವೈಯಕ್ತಿಯ ದ್ವೇಷ ಮತ್ತು ದುರುದ್ದೇಶದಿಂದ ದೂರನ್ನು ಸಲ್ಲಿಸಿರುತ್ತಾರೆ. ಇವರಿಗೂ ಸಂಘಕ್ಕೂ ಯಾವುದೇ ಸಂಬಂಧವಿರುವುದಿಲ್ಲ ಹಾಗೂ ದೂರಿನಲ್ಲಿನ ಅಂಶಗಳು ಸತ್ಯಕ್ಕೆ ದೂರವಾಗಿರುತ್ತದೆ. 3 ಮತ್ತು 4ನೇ ಎದುರುದಾರರು ಹಾಗೂ ಸಹಾಯಕ ಅಭಿಯಂತರರಾದ ಶ್ರೀ.ಡಿ.ಟಿ.ಸುರೇಶ್‌ರೆಡ್ಡಿ ಯವರು ಕಟ್ಟಡ ಸ್ಥಳ ಪರಿಶೀಲನೆ ಮಾಡಿ, ಕಾಮಗಾರಿ ಪೂರ್ಣಗೊಂಡಿರುವ ಬಗ್ಗೆ ಪ್ರಮಾಣ ಪತ್ರವನ್ನು ನೀಡಲಾಗಿರುತ್ತದೆ ಮತ್ತು ಕಟ್ಟಡವು ಪೂರ್ಣಗೊಂಡು ಸಂಘದ ಅಧ್ಯಕ್ಷರಿಗೆ ಹಸ್ತಾಂತರಿಸಲಾಗಿದೆ. ಸದರಿ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡುವ ಹಂತದಲ್ಲಿ ಬಳ್ಳಾರಿ ನಗರಪಾಲಿಕೆಯ ಇಂಜಿನಿಯರ್‌ಗಳು, ಆಯುಕ್ತರು ಸಹ ಪರಿಶೀಲನೆ ಮಾಡಿ ಹಣ ಬಿಡುಗಡೆ ಮಾಡಿರುತ್ತಾರೆ. ಇದರಲ್ಲಿ ಯಾವುದೇ ಅವ್ಯವಹಾರವಾಗಲೀ, ಭ್ರಷ್ಟಾಚಾರವಾಗಲೀ ನಡೆದಿರುವುದಿಲ್ಲ. ದೂರುದಾರರು ಸುಳ್ಳು ದೂರನ್ನು ಸಲ್ಲಿಸಿರುತ್ತಾರೆಂದು ಹೇಳಿರುತ್ತಾರೆ.

10. ಮೇಲಿನ ಅಂಶಗಳನ್ನು ಗಮನಿಸಿದಾಗ ಹಾಗೂ ದಾಖಲಾತಿಗಳನ್ನು ಪರಿಶೀಲಿಸಿದಾಗ, ಖಾಸಗಿ ಸಂಸ್ಥೆಯವರಿಗೆ ಹಾಸ್ಟೆಲ್ ನಿರ್ಮಾಣಕ್ಕಾಗಿ ಹಣವನ್ನು ಬಳ್ಳಾರಿ ಮಹಾನಗರ ಪಾಲಿಕೆಯವರು ನೀಡಿರುವುದು ಕಂಡುಬರುತ್ತದೆ. ಸ್ಥಳದಲ್ಲಿ ಕಟ್ಟಡವನ್ನು ಕಟ್ಟಿದ್ದರೂ ಸಹ ಸದರಿ ಕಟ್ಟಡದಲ್ಲಿ ಯಾವುದೇ ಹಾಸ್ಟೆಲ್ ಇರುವುದು ಕಂಡುಬರುತ್ತಿಲ್ಲ. ಹಾಸ್ಟೆಲ್ ಕಟ್ಟಡಕ್ಕಾಗಿ ಅನುದಾನ ಬಿಡುಗಡೆ ಮಾಡಿದ್ದು, ಖಾಲಿ ಕಟ್ಟಡವನ್ನು ಮಾತ್ರ ಕಟ್ಟಿ ಹಾಸ್ಟೆಲ್ ನಡೆಸದೆ ಇದ್ದರೂ ಸಹ ಹಣವನ್ನು ಬಿಡುಗಡೆ ಮಾಡಿರುವುದು ಕಂಡುಬರುತ್ತದೆ. ಕಾರ್ಯನಿರ್ವಾಹಕ ಅಭಿಯಂತರರು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ ರವರು ಪ್ರಗತಿ ವರದಿಯನ್ನು ಸಲ್ಲಿಸಿ ಕಾಮಗಾರಿಗೆ ಅನುದಾವನ್ನು ಬಿಡುಗಡೆ ಮಾಡಲು ಕೋರಿರುವುದು ಕಂಡುಬರುತ್ತದೆ. ಅದೇ ರೀತಿ ಮಂಜೂರು ಮಾಡಿರುವ ಹಣವನ್ನು ನಿಗದಿತ ಉದ್ದೇಶಕ್ಕೆ ಉಪಯೋಗಿಸಲಾಗಿದೆ ಎಂದು ಕಾರ್ಯನಿರ್ವಾಹಕ ಅಭಿಯಂತರರು ರವರು ಕರ್ನಾಟಕ ಗ್ರಾಮೀಣಾ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ ಬಳ್ಳಾರಿ ಇವರು ವರದಿಯನ್ನು ನೀಡಿರುವುದು ಕಂಡುಬರುತ್ತದೆ. ದಿ.24/2/2014 ರಂದು ಉಪ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ ಬಳ್ಳಾರಿ ಇವರು ಆಯುಕ್ತರಿಗೆ ಪತ್ರ ಬರೆದು ಕಾಮಗಾರಿ ಅನುಷ್ಠಾನಕ್ಕೆ ರೂ.6,12,500/- ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಬಿಡುಗಡೆಯಾದ ಅನುದಾನವನ್ನು ಪೂರ್ಣವಾಗಿ ಕಾಮಗಾರಿಗೆ ವಿನಿಯೋಗಿಸಿ

ಉಪಯೋಗಿತ ಪತ್ರವನ್ನು ಲಗತ್ತಿಸಿ ಬಾಕಿ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿರುವುದು ಕಂಡುಬರುತ್ತದೆ. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಮಹಾನಗರ ಪಾಲಿಕೆ ಬಳ್ಳಾರಿ ಇವರು ಪೇಮೆಂಟ್ ಆದೇಶಕ್ಕೆ ಸಹಿ ಮಾಡಿರುವುದು ಕಂಡುಬರುತ್ತದೆ. ಸದರಿ ಕಟ್ಟಡ ಕಾಮಗಾರಿಯನ್ನು ನಡೆಸಲು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ ಬಳ್ಳಾರಿ ಇವರಿಗೆ ಕಳುಹಿಸಿ ಕೊಟ್ಟಿರುವುದು ಕಂಡುಬರುತ್ತದೆ. ಅದನ್ನು ಗಮನಿಸಿದಾಗ ಕಟ್ಟಡ ಮುಕ್ತಾಯಗೊಂಡ ಬಗ್ಗೆ ಪ್ರಮಾಣ ಪತ್ರವನ್ನು ನೀಡಿರುವ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ ಬಳ್ಳಾರಿ ಹಾಗೂ ಹಾಸ್ಟೆಲ್ ನಿರ್ಮಾಣವಾಗದಿದ್ದರೂ ಸಹ ಕಾಮಗಾರಿ ಪೂರ್ಣಗೊಂಡಿದೆ ಎಂದು ಪ್ರಮಾಣ ಪತ್ರ ನೀಡಿದ್ದಾರೆ ಎಂದು ಹೇಳಲಾದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಭೂ ಸೇನಾ ನಿಗಮ ಬಳ್ಳಾರಿ ಹಾಗೂ ಆಯುಕ್ತರು ಮಹಾನಗರ ಪಾಲಿಕೆ ಬಳ್ಳಾರಿ ಇವರುಗಳು ಕರ್ತವ್ಯಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಹಾಸ್ಟೆಲ್ ಕಟ್ಟಡಕ್ಕಾಗಿ ಅನುದಾನ ಬಿಡುಗಡೆ ಮಾಡಿದ್ದರೂ ಸಹ ಕಟ್ಟಡವನ್ನು ಕಟ್ಟಿ ಹಾಸ್ಟೆಲ್ ಸೌಲಭ್ಯವನ್ನು ನೀಡಿದ್ದಾರೋ, ಇಲ್ಲವೋ ಎನ್ನುವುದನ್ನು ಸರಿಯಾಗಿ ಪರಿಶೀಲಿಸದೆ ಅನುದಾನ ಬಿಡುಗಡೆ ಮಾಡಿ ನಿಗದಿತ ಉದ್ದೇಶಕ್ಕೆ ಹಣವನ್ನು ಉಪಯೋಗಿಸಲಾಗಿದೆಯೆಂದು ವರದಿ ನೀಡಿ 1 ರಿಂದ 4ನೇ ಎದುರುದಾರರು ಕರ್ತವ್ಯಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿದ್ದು, (1) ಶ್ರೀ.ಡಿ.ಎಲ್.ನಾರಾಯಣ್, ಆಯುಕ್ತರು, ಮಹಾನಗರ ಪಾಲಿಕೆ, ಬಳ್ಳಾರಿ (ಹಾಲಿ ನಿವೃತ್ತ), (2) ಶ್ರೀ.ಜಿ.ಬಿ.ದೇವರಾಜು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಮಹಾನಗರ ಪಾಲಿಕೆ, ಬಳ್ಳಾರಿ (ಹಾಲಿ ಕಾರ್ಯಪಾಲಕ ಅಭಿಯಂತರರು, ಕೆ.ಆರ್.ಐ.ಡಿ.ಎಲ್, ದಾವಣಗೆರೆ ವಿಭಾಗ–2), (3) ಶ್ರೀ.ಬಿ.ಪಿ.ಲಿಂಗರಾಜು, ಉಪ ನಿರ್ದೇಶಕರು/ಕಾರ್ಯಪಾಲಕ ಅಭಿಯಂತರರು, ಕೆ.ಆರ್.ಐ.ಡಿ.ಎಲ್, ಬಳ್ಳಾರಿ (ಹಾಲಿ ಕೆ.ಆರ್.ಐ.ಡಿ.ಎಲ್, ಕೇಂದ್ರ ವಲಯ, ಚಿತ್ರದುರ್ಗ) ಮತ್ತು **(4)** ಶ್ರೀ.ಅಶ್ವಥ ನಾರಾಯಣ ಸ್ವಾಮಿ, ಸಹಾಯಕ ನಿರ್ದೇಶಕರು/ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಆರ್.ಐ.ಡಿ.ಎಲ್, ಬಳ್ಳಾರಿ, ಇವರು ಸಲ್ಲಿಸಿರುವ ಆಕ್ಷೇಪಣೆಯು ಅವರ ಮೇಲಿನ ಆಪಾದನೆಯನ್ನು ಅಲ್ಲಗಳೆಯಲು ಸೂಕ್ತ ಹಾಗೂ ಸಮಂಜಸವಾಗಿರುವುದಿಲ್ಲ. ಆದ್ದರಿಂದ, ಎದುರುದಾರರಾದ ಶ್ರೀ.ಸೈಯದ್ ಮುನೀರ್ ಅಹಮದ್ ಮತ್ತು ಶ್ರೀಮತಿ.ಎಂ.ಸತ್ಯಭಾಮ, ಇವರು ಶಿಸ್ತು ಕ್ರಮಕ್ಕೆ ಬಾಧ್ಯಸ್ಥರಾಗಿರುತ್ತಾರೆ.

11. ಎದುರುದಾರರಾದ (1) ಶ್ರೀ.ಡಿ.ಎಲ್.ನಾರಾಯಣ್, (2) ಶ್ರೀ.ಜಿ.ಬಿ.ದೇವರಾಜು, (3) ಶ್ರೀ.ಬಿ.ಪಿ.ಲಿಂಗರಾಜು ಮತ್ತು (4) ಶ್ರೀ.ಅಶ್ವಥ ನಾರಾಯಣ ಸ್ವಾಮಿ, ಇವರು

N. Ananda

ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೆ, ಕರ್ತವ್ಯಲೋಪವೆಸಗಿ, ದುರ್ವರ್ತನೆ ತೋರಿಸಿ, ನಿಯಮಗಳನ್ನು ಉಲ್ಲಂಘಿಸಿ ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ, ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ 1966 ರ ನಿಯಮ 3(1)(ii) ಮತ್ತು (iii) ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡುಬಂದಿದ್ದರಿಂದ, ಅವರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14–ಎ ರ ಅಡಿಯಲ್ಲಿ, ಎದುರುದಾರರಾದ (1) ಶ್ರೀ.ಡಿ.ಎಲ್.ನಾರಾಯಣ್, (2) ಶ್ರೀ.ಜಿ.ಬಿ.ದೇವರಾಜು, (3) ಶ್ರೀ.ಬಿ.ಪಿ.ಲಿಂಗರಾಜು ಮತ್ತು (4) ಶ್ರೀ.ಅಶ್ವಥ ನಾರಾಯಣ ಸ್ವಾಮಿ, ಇವರ ವಿರುದ್ಧ ವಿಚಾರಣೆ ನಡೆಸಲು ಹಾಗೂ **1ನೇ ಎದುರುದಾರರಾದ ಶ್ರೀ.ಡಿ.ಎಲ್.ನಾರಾಯಣ್ ಇವರು ದಿ.29/11/2014 ರಲ್ಲಿ ನಿವೃತ್ತಿಯಾಗಿರುವುದರಿಂದ ಸದರಿಯವರ ವಿರುದ್ಧ ಕರ್ನಾಟಕ ಸೇವಾ ನಿಯಮಾವಳಿಗಳ ನಿಯಮ 214(2)(ಬಿ)(i) ರಂತೆ ಸರ್ಕಾರದ ಅನುಮತಿಯೊಂದಿಗೆ** ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ, ಶಿಸ್ತು ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿದೆ.

12. ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(4) ರ ಪ್ರಕಾರ, ಶಿಸ್ತು ಪ್ರಾಧಿಕಾರವು ವರದಿಯಂತೆ ಕ್ರಮ ಕೈಗೊಂಡು ಅಥವಾ ಕೈಗೊಳ್ಳಬಹುದಾದ ಕ್ರಮವನ್ನು ಈ ವರದಿ ತಲುಪಿದ ದಿನಾಂಕದಿಂದ **ಮೂರು ತಿಂಗಳೊಳಗಾಗಿ** ಈ ಪ್ರಾಧಿಕಾರಕ್ಕೆ ತಿಳಿಸಲೂ ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

N. Anand
(ನ್ಯಾಯಮೂರ್ತಿ ಎನ್.ಆನಂದ್)
ಉಪಲೋಕಾಯುಕ್ತರು,
ಕರ್ನಾಟಕ ರಾಜ್ಯ, ಬೆಂಗಳೂರು.